ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು–560003

****************************************************************************************************

ಸಂಖ್ಯೆ : ಸಿಎಸ್2/ಎಸ್.ಎಸ್.ಎಲ್.ಸಿ/ಪೂ.ಪ/ಮೌ.ಮಾ.ಆ/01/2021–22 ದಿನಾಂಕ:29.06.2022

ಪರೀಕ್ಷಾತುರ್ತು

:: ಸುತ್ತೋಲೆ ::

**ವಿಷಯ:** 2022ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಮೌಲ್ಯಮಾಪನ ಕಾರ್ಯದ ಉಪಮುಖ್ಯ ಮೌಲ್ಯಮಾಪಕರ ಹಾಗೂ ಸಹಾಯಕ ಮೌಲ್ಯಮಾಪಕರ ಆದೇಶಗಳನ್ನು ಬಿ.ಇ.ಓ. ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

*******

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ 2022ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ದಿನಾಂಕ:10–07–2022ರಿಂದ ಪ್ರಾರಂಭವಾಗುತ್ತಿದ್ದು, ದಿನಾಂಕ:10–07–2022ರಂದು ಜಂಟಿ ಮುಖ್ಯ ಮೌಲ್ಯಮಾಪಕರು ಮತ್ತು ಉಪಮುಖ್ಯ ಮೌಲ್ಯಮಾಪಕರು ಹಾಗೂ ದಿನಾಂಕ:11–07–2022ರಂದು ಸಹಾಯಕ ಮೌಲ್ಯಮಾಪಕರು ಹಾಜರಾಗಬೇಕಾಗಿದೆ. ಈ ಸಂಬಂಧ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜನೆಗೊಂಡಿರುವ ಉಪಮುಖ್ಯ ಮೌಲ್ಯಮಾಪಕರ ಮತ್ತು ಸಹಾಯಕ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಬಿ.ಇ.ಓ. ಲಾಗಿನ್‌ನಲ್ಲಿ ದಿನಾಂಕ:29–06–2022ರಿಂದ ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ.

1) ಮಂಡಳಿಯ ಜಾಲತಾಣ https://sslc.karnataka.gov.in ಬಿ.ಇ.ಓ. ಲಾಗಿನ್‌ನಲ್ಲಿ Evaluation Orders of SSLC Supplementary Exam 2022 ಮೆನುವಿನಲ್ಲಿ ಮೌಲ್ಯಮಾಪಕರ ನೇಮಕಾತಿ ಆದೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.
2) ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಂದ ಮೌಲ್ಯಮಾಪನ ಕಾರ್ಯಕ್ಕಾಗಿ ನಿಯೋಜಿಸಿರುವ ಅರ್ಹ ಶಿಕ್ಷಕರ ನೇಮಕಾತಿ ಆದೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ, ಸಂಬಂಧ ಪಟ್ಟ ಮುಖ್ಯ ಶಿಕ್ಷಕರಿಗೆ ವಿತರಣೆ ಮಾಡಿ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗುವಂತೆ ನಿರ್ದೇಶನ ನೀಡುವುದು.

29/6/2022

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು (ಪರೀಕ್ಷೆಗಳು)

**ಅಗತ್ಯ ಕ್ರಮಕ್ಕಾಗಿ :**

1) ರಾಜ್ಯದ ಎಲ್ಲಾ ಜಿಲ್ಲೆಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ – ಬಿ.ಇ.ಓ. ಲಾಗಿನ್ ಮೂಲಕ
2) ರಾಜ್ಯದ ಎಲ್ಲಾ ಜಿಲ್ಲೆಗಳ ಸಂಬಂಧಿಸಿದ ಸರ್ಕಾರಿ, ಅನುದಾನಿತ ಹಾಗೂ ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ – ಶಾಲಾ ಲಾಗಿನ್ ಮೂಲಕ